# All India Radio: Bangalore
# Regional Bulletin In Kannada
# 26.07.2026 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಜ್ಯದಲ್ಲಿ ಬರ ಪರಿಸ್ಥಿತಿ ಹಿನ್ನೆಲೆ ; ನಾಳೆ ದೆಹಲಿಯಲ್ಲಿ ರಾಜ್ಯ ಸಂಸದರ ಸಭೆ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
2. ಮುಂದಿನ ತಿಂಗಳು ಕೇಂದ್ರಕ್ಕೆ ಬರ ಪರಿಶೀಲನೆ ವರದಿ ಸಲ್ಲಿಕೆ - ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್
3. ಬಿಪಿಎಲ್ ಕಾರ್ಡ್ ಪಡೆಯಲು ವಾರ್ಷಿಕ ಆದಾಯ ಮಿತಿ ೩ ಲಕ್ಷ ರೂಪಾಯಿಗೆ ಹೆಚ್ಚಿಸಲು ಕ್ರಮ - ಸಚಿವ ಕೆ.ಎಚ್.ಮುನಿಯಪ್ಪ
4. ಇಂದು ಕಾರ್ಗಿಲ್ ವಿಜಯ್ ದಿವಸ ; ರಾಜ್ಯದಲ್ಲಿ ವಿವಿಧೆಡೆ ಹುತಾತ್ಮ ಯೋಧರ ಸ್ಮರಣೆ

<><><><>

ರಾಜ್ಯದಲ್ಲಿನ ಬರ ಪರಿಸ್ಥಿತಿ ಕುರಿತು ನಾಳೆ ರಾಜ್ಯದ ಸಂಸದರ ಸಭೆ ಆಯೋಜಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ಸಂಜೆ ದೆಹಲಿಯಲ್ಲಿ ರಾಜ್ಯದ ಎಲ್ಲಾ ಸಂಸದರ ಸಭೆ ಕರೆಯಲಾಗಿದೆ. ಸಭೆಯಲ್ಲಿ ರಾಜ್ಯ ಪ್ರತಿನಿಧಿಸುವ ಕೇಂದ್ರದ ಸಚಿವರೂ ಭಾಗಿಯಾಗಲಿದ್ದಾರೆ. ಬರ ಪರಿಸ್ಥಿತಿಯಲ್ಲಿ ಎಲ್ಲರೂ ಒಂದಾಗಿ ಕೆಲಸ ಮಾಡಬೇಕು. ಈ ಸಂಕಷ್ಟ ಸಮಯದಲ್ಲಿ ಕೇಂದ್ರ ಸರ್ಕಾರ ನೆರವು ನೀಡುವ ನಿರೀಕ್ಷೆ ಇದೆ ಎಂದರು. ಆಗಸ್ಟ್ ೧೩ ರಿಂದ ರಾಜ್ಯ ವಿಧಾನಸಭೆಯ ಮುಂಗಾರು ಅಧಿವೇಶನ ಕರೆಯಲು ತೀರ್ಮಾನಿಸಲಾಗಿದೆ" ಎಂದು ತಿಳಿಸಿದರು.

<><><><>

ರಾಜ್ಯದ ಮೂರು ವಿಭಾಗಗಳಲ್ಲಿ ಬರ ಪರಿಸ್ಥಿತಿ ಪರಿಶೀಲನೆ ನಡೆಸಿದ್ದು, ಮುಂದಿನ ತಿಂಗಳು ಕೇಂದ್ರ ಸರ್ಕಾರಕ್ಕೆ ಸಂಪೂರ್ಣ ಮಾಹಿತಿ ಸಲ್ಲಿಸುವುದಾಗಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಇಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈಗಾಗಲೇ ಮುಖ್ಯಮಂತ್ರಿ ಜೊತೆಗೆ ಮೂರು ವಿಭಾಗಗಳನ್ನು ವೀಕ್ಷಿಸಿದ್ದು, ಬರದ ಪರಿಸ್ಥಿತಿಯ ಪರಿಶೀಲನೆ ನಡೆಸಿದ್ದೇವೆ. ಶೀಘ್ರವೇ ಮೈಸೂರು ವಿಭಾಗದಲ್ಲೂ ಪರಿಶೀಲನಾ ಸಭೆ ನಡೆಸುತ್ತೇವೆ ಎಂದರು. ನಾಳೆ ದೆಹಲಿಯಲ್ಲಿ ರಾಜ್ಯದ ಎಲ್ಲ ಸಂಸದರ ಸಭೆಯನ್ನು ಕರೆದಿದ್ದು, ಬರ ಪರಿಸ್ಥಿತಿಯ ನಿರ್ವಹಣೆಗೆ ಸಹಕಾರ ನೀಡುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವಂತೆ ಅವರಲ್ಲಿ ಮನವಿ ಮಾಡಿಕೊಳ್ಳುತ್ತೇವೆ ಎಂದು ತಿಳಿಸಿದರು.

<><><><>

ಆರೋಗ್ಯ ಸೇವೆಯಲ್ಲಿ ಫಿಸಿಯೋಥೆರಪಿಗೆ ಹೆಚ್ಚಿನ ಆದ್ಯತೆ ನೀಡುವ ಜೊತೆಗೆ, ಕ್ರೀಡಾ ಕ್ಷೇತ್ರದಲ್ಲಿ ಇದರ ಬಳಕೆಯನ್ನು ಮತ್ತಷ್ಟು ವಿಸ್ತರಿಸಿ, ಕರ್ನಾಟಕವನ್ನು ಫಿಸಿಯೋಥೆರಪಿಯ ಪ್ರಮುಖ ಕೇಂದ್ರವನ್ನಾಗಿ ರೂಪಿಸುವ ಅಗತ್ಯವಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ನಗರದಲ್ಲಿಂದು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೈಹಿಕ ಚಿಕಿತ್ಸೆಯ ವಿವಿಧ ವಿಧಾನಗಳು ಪ್ರಾಚೀನ ಕಾಲದಿಂದಲೂ ಅಸ್ತಿತ್ವದಲ್ಲಿದ್ದರೂ, ವಿಶೇಷವಾಗಿ ವಿಶ್ವಯುದ್ಧಗಳ ನಂತರ ಗಾಯಗೊಂಡ ಸೈನಿಕರ ಪುನರ್ವಸತಿಯ ಅಗತ್ಯತೆಯೊಂದಿಗೆ ಫಿಸಿಯೋಥೆರಪಿ ವೈಜ್ಞಾನಿಕ ಚಿಕಿತ್ಸಾ ಪದ್ಧತಿಯಾಗಿ ಬೆಳೆಯಿತು ಎಂದು ಹೇಳಿದರು. ಇಂದು ಇದು ಜಾಗತಿಕ ಆರೋಗ್ಯ ವ್ಯವಸ್ಥೆಯ ಅವಿಭಾಜ್ಯ ಅಂಗವಾಗಿದ್ದು, ರೋಗಿಗಳ ಪುನರ್ವಸತಿ, ಶೀಘ್ರ ಚೇತರಿಕೆ ಹಾಗೂ ಉತ್ತಮ ಜೀವನಮಟ್ಟ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

<><><><>

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ಕ್ಷೇತ್ರದ ೧೪ ಕೆರೆಗಳಿಗೆ ನೀರು ತುಂಬಿಸುವ ೨೪೪ ಕೋಟಿ ರೂಪಾಯಿ ಮೊತ್ತದ ಯೋಜನೆಗೆ ಸಚಿವ ಸಂಪುಟದಲ್ಲಿ ಒಪ್ಪಿಗೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಚಿತ್ರದುರ್ಗದ ಹಿರಿಯೂರಿನಲ್ಲಿಂದು ನಡೆದ ಮಾಜಿ ಸಚಿವ ದಿವಂಗತ ಡಿ.ಸುಧಾಕರ್ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಿಂದ ಜನರಿಗೆ ಅನುಕೂಲವಾಗಿದೆ.

ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ೧ ಕೋಟಿ ೬೦ ಲಕ್ಷ ಕುಟುಂಬಗಳಿಗೆ ೨೦೦ ಯೂನಿಟ್ ಉಚಿತ ವಿದ್ಯುತ್ ಸಿಗುತ್ತಿದೆ ಎಂದರು.

<><><><>

ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠನಾ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಅವರ ನೇತೃತ್ವದಲ್ಲಿ ಇಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಬಳಿಕ ಮಾಧ್ಯಮದವರನ್ನುದ್ದೇಶಿಸಿ ಮಾತನಾಡಿದ ಸಚಿವರು, ಅನ್ನಭಾಗ್ಯ ಯೋಜನೆಯ ಮೂಲಕ ರಾಜ್ಯದಲ್ಲಿ ಸುಮಾರು ೪ ಕೋಟಿ ೪ ಲಕ್ಷ ಫಲಾನುಭವಿಗಳಿಗೆ ೧೦ ಕೆ.ಜಿ ಪಡಿತರ ವಿತರಣೆ ಮಾಡುತ್ತಿದ್ದೇವೆ ಎಂದು ತಿಳಿಸಿದರು. ಬಿಪಿಎಲ್ ಪಡೆಯಲು ನಿಗದಿಪಡಿಸಿದ ೧ ಲಕ್ಷ ೨೦ ಸಾವಿರ ವಾರ್ಷಿಕ ಆದಾಯವನ್ನು ಆಡಳಿತಾತ್ಮಕ ಸುಧಾರಣೆ ಆಯೋಗದ ಶಿಫಾರಸ್ಸಿನಂತೆ ೩ ಲಕ್ಷ ರೂಪಾಯಿಗೆ ಹೆಚ್ಚಿಸಲು ಕ್ರಮ ವಹಿಸಲಾಗುತ್ತಿದೆ ಎಂದರು. ಪಡಿತರ ವಿತರಣೆಯಲ್ಲಿ ಕಾಳಸಂತೆಯನ್ನು ತಡೆಯಲು ಕ್ರಮವಹಿಸಿದ್ದು ಗೋದಾಮುಗಳಿಗೆ ಸಿಸಿ ಕ್ಯಾಮರಾ ಹಾಗೂ ಪಡಿತರ ವಾಹನಗಳಿಗೆ ಜಿಪಿಎಸ್ ಅಳವಡಿಕೆ ಮತ್ತಿತರ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು. ಇಂದಿರಾ ಕಿಟ್ ನೀಡಲು ಟೆಂಡರ್ ಪ್ರಕ್ರಿಯೆಯು ನಡೆಯುತ್ತಿದ್ದು ಅಂತಿಮ ಹಂತದಲ್ಲಿ ಇದೆ ಮುಂದಿನ ಎರಡು ತಿಂಗಳಲ್ಲಿ ಕಿಟ್ ವಿತರಣೆಗೆ ಕಾರ್ಯ ರೂಪಿಸುತ್ತಿದ್ದೇವೆ ಎಂದು ತಿಳಿಸಿದರು. ನ್ಯಾಯಬೆಲೆ ಅಂಗಡಿಗಳನ್ನು ಬೆಳಗ್ಗೆ ೬ ರಿಂದ ರಾತ್ರಿ ೧೦ ರವರೆಗೂ ತೆರೆದು ಪಡಿತರ ವಿತರಿಸಲು ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಇಲಾಖೆಯ ಸಹಾಯವಾಣಿ ಸಂಖ್ಯೆ ೧-೯-೬-೭ ಸಹಾಯವಾಣಿಗೆ ಕರೆಮಾಡಿ ದೂರು ನೀಡಲು ಸೂಚಿಸಿದರು.

<><><><>

ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಿ ಅವರ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬ ವೈದ್ಯರ ಪ್ರಮುಖ ಕರ್ತವ್ಯವಾಗಿದೆ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಸಚಿವರು, ಬಡವರು ಸೇರಿದಂತೆ ಪ್ರತಿಯೊಬ್ಬರಿಗೂ ಉತ್ತಮ ಚಿಕಿತ್ಸೆ ದೊರೆಯುವಂತೆ ಆಸ್ಪತ್ರೆಗಳು ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ಸಮಾರಂಭದಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಮತ್ತಿತರರು ಉಪಸ್ಥಿತರಿದ್ದರು.

<><><><>

ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ ದಿವಸ ಆಚರಿಸಲಾಯಿತು. ೧೯೯೯ರ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ವೀರ ಯೋಧರ ಸ್ಮರಣಾರ್ಥ ಪ್ರತಿ ವರ್ಷ ಜುಲೈ ೨೬ ರಂದು ವಿಶೇಷ ನಮನ ಸಲ್ಲಿಸಲಾಗುತ್ತದೆ. ಮಂಗಳೂರಿನ ಕದ್ರಿಹಿಲ್ಸ್‌ನಲಿರುವ ಯುದ್ಧ ಸ್ಮಾರಕದಲ್ಲಿಂದು ಕಾರ್ಗಿಲ್ ವಿಜಯ ದಿವಸ ಕಾರ್ಯಕ್ರಮ ಹಾಗೂ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಭಾರತೀಯ ಸೇನೆಯಲ್ಲಿ ಬಳಸಿದ ಯುದ್ಧ ಟ್ಯಾಂಕ್ ಟಿ ೫೫ ಲೋಕಾರ್ಪಣೆ ಕಾರ್ಯಕ್ರಮ ನಡೆಯಿತು. ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ದೇಶಕ್ಕಾಗಿ ಹೋರಾಡಿ ಮಡಿದ ಯೋಧರನ್ನು ಸದಾ ಸ್ಮರಿಸಿವುದು ಭಾರತೀಯರಾದ ನಮ್ಮೆಲ್ಲರ ಕರ್ತವ್ಯ ಎಂದರು. ಮಡಿಕೇರಿಯಲ್ಲಿಂದು ವಿವಿಧ ಸಂಘ ಸಂಸ್ಥೆಗಳು ಕಾರ್ಗಿಲ್ ವಿಜಯ ದಿವಸ್ ಅನ್ನು ಅರ್ಥಪೂರ್ಣವಾಗಿ ಆಚರಿಸಿದವು. ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿ ಅಮರ್ ಜವಾನ್ ಸ್ಮಾರಕ ಮತ್ತು ಮಡಿಕೇರಿಯ ಯುದ್ಧ ಸ್ಮಾರಕದಲ್ಲಿಯೂ ಸಂಘಸಂಸ್ಥೆಗಳು ಪುಷ್ಪ ನಮನ ಸಲ್ಲಿಸಿದವು. ರೋಟರಿ ವುಡ್ಸ್ ಸಂಸ್ಥೆಯಿಂದ ಆಯೋಜಿತ ಕಾರ್ಯಕ್ರಮದಲ್ಲಿ ಕುಶಾಲನಗರ ಯೋಧದಂಪತಿ ಬಿ.ಜಗದೀಶ್ ಮತ್ತು ಲೀಲವೇಣಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬೆಳಗಾವಿಯ ಮರಾಠಾ ಲೈಟ್ ಇನ್‌ಫೆಂಟ್ರಿ ರೆಜಿಮೆಂಟಲ್ ಸೆಂಟರ್ ಮರಾಠಾ ಲಘು ಪದಾತಿದಳದಲ್ಲಿ ಇಂದು ೨೬ನೇ ಕಾರ್ಗಿಲ್ ವಿಜಯ್ ದಿವಸ್ ಅನ್ನು ಆಚರಿಸಲಾಯಿತು. ಯುದ್ಧ ಸ್ಮಾರಕಕ್ಕೆ ಪುಷ್ಪಾರ್ಚನೆ ಮಾಡಿ ಹುತಾತ್ಮ ಯೋಧರಿಗೆ ಗೌರವ ಸಲ್ಲಿಸಲಾಯಿತು. ಮರಾಠಾ ಎಲ್ಐಆರ್‌ಸಿಯ ಕಮಾಂಡೆಂಟ್ ಬ್ರಿಗೇಡಿಯರ್ ಗಿರೀಶ್ ಉಪಾಧ್ಯ ಮಾತನಾಡಿ, ಕಾರ್ಗಿಲ್ ಹೋರಾಟದಲ್ಲಿ ಗೆಲವು ತಂದುಕೊಟ್ಟ ಯೋಧರ ಅಪ್ರತಿಮ ಧೈರ್ಯ, ಅಚಲ ಸಮರ್ಪಣೆ ಮತ್ತು ನಿಸ್ವಾರ್ಥ ಸೇವೆ ಅನನ್ಯವಾದದ್ದು ಎಂದು ತಿಳಿಸಿದ್ದಾರೆ. ಗದಗ ಜಿಲ್ಲಾ ಹಾಲಿ ಮತ್ತು ಮಾಜಿ ಯೋಧರ ಕ್ಷೇಮಾಭಿವೃದ್ಧಿ ಸಂಘ ಮತ್ತು ಗದಗ ಜಿಲ್ಲಾ ರೆಡ್ ಕ್ರಾಸ್ ಆಶ್ರಯದಲ್ಲಿ ನಡೆದ ಸಮಾರಂಭದಲ್ಲಿ ಕಾರ್ಗಿಲ್ ಯುದ್ಧದ ಸಂದರ್ಭದಲ್ಲಿ ತಮ್ಮ ಪ್ರಾಣದ ಹಂಗು ತೊರೆದು ದೇಶವನ್ನು ರಕ್ಷಿಸಿದ ೫೨೭ ಜನ ವೀರ ಹುತಾತ್ಮ ಯೋಧರಿಗೆ ನಮನ ಸಲ್ಲಿಸಲಾಯಿತು.

<><><><>

ಕೃಷ್ಣಾ ನದಿ ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ಮಳೆಯಿಂದ ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಗಳಿಗೆ ನೀರಿನ ಹರಿವು ಪ್ರಮಾಣದಲ್ಲಿ ಏರಿಕೆಯಾಗಿದೆ. ಎರಡೂ ಜಲಾಶಯಗಳಲ್ಲೂ ನೀರಿನ ಸಂಗ್ರಹಣೆ ಗಣನೀಯವಾಗಿ ಹೆಚ್ಚಳಗೊಂಡಿದೆ. ಆಲಮಟ್ಟಿ ಜಲಾಶಯದ ಕಳೆದ ೨೪ ಗಂಟೆಗಳ ಸರಾಸರಿ ಒಳಹರಿವು ೮೩ ಸಾವಿರದ ೯೪೮ ಕ್ಯೂಸೆಕ್ ಆಗಿದ್ದು, ಸರಾಸರಿ ಹೊರಹರಿವು ೪೯ ಸಾವಿರದ ೫೫೦ ಕ್ಯೂಸೆಕ್ ಆಗಿದೆ. ಪ್ರಸ್ತುತ ನದಿಗೆ ೩೫ ಸಾವಿರ  ಕ್ಯೂಸೆಕ್ ನೀರನ್ನು ಹರಿಸಲಾಗುತ್ತಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ. ಮೇಲ್ಭಾಗದ ಜಲಾನಯನ ಪ್ರದೇಶದಲ್ಲಿ ಮಳೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಜಲಾಶಯಗಳ ಒಳಹರಿವಿನಲ್ಲಿ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಕೃಷ್ಣಾ ನದಿ ಪಾತ್ರದ ಗ್ರಾಮಗಳ ಜನರು ಹಾಗೂ ರೈತರು ನದಿಗೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ.

<><><><>

ದೋಷರಹಿತ ಮತದಾರರ ಪಟ್ಟಿಯೇ ಸದೃಢ ಪ್ರಜಾಪ್ರಭುತ್ವದ ಭದ್ರ ಅಡಿಪಾಯ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅಭಿಪ್ರಾಯಪಟ್ಟಿದ್ದಾರೆ. ಪದ್ಮನಾಭನಗರ ವಿಧಾನಸಭಾ ಕ್ಷೇತ್ರದಲ್ಲಿ ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರತಿಯೊಬ್ಬ ಅರ್ಹ ಮತದಾರರ ಹೆಸರನ್ನು ಮತದಾರರ ಪಟ್ಟಿಯಲ್ಲಿ ನಿಖರವಾಗಿ ದಾಖಲು ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸೋಣ ಎಂದು ಅವರು ಕರೆ ನೀಡಿದರು.

<><><><>

ಚಿತ್ರದುರ್ಗದ ರಾಷ್ಟ್ರೀಯ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಂಸ್ಥೆ  ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ  ಹಾಗೂ ಇ-ಚಿಪ್-ಹಬ್ ಆಶ್ರಯದಲ್ಲಿ ದಾವಣಗೆರೆಯಲ್ಲಿ ನಾಳೆ ೯೦ ಗಂಟೆಗಳ 'ಚಿಪ್ ಕ್ರಾಫ್ಟ್' ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಭಾರತವನ್ನು ಜಾಗತಿಕ ಸೆಮಿಕಂಡಕ್ಟರ್ ಹಬ್ ಆಗಿ ರೂಪಿಸುವ ರಾಷ್ಟ್ರೀಯ ದೃಷ್ಟಿಕೋನಕ್ಕೆ ಬಲ ತುಂಬುವ ಹಾಗೂ ವಿದ್ಯಾರ್ಥಿಗಳಲ್ಲಿ ಉದ್ಯಮಕ್ಕೆ ಅಗತ್ಯವಿರುವ ತಾಂತ್ರಿಕ ಕೌಶಲ್ಯಗಳನ್ನು ವೃದ್ಧಿಸುವ  ಉದ್ದೇಶದಿಂದ  ಈ ಕಾರ್ಯಕ್ರಮ ಆಯೋಜನೆಗೊಂಡಿದೆ.

<><><><>

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನಲ್ಲಿ ಸಂಭವಿಸಿದ ಅಪಘಾತದಲ್ಲಿ ಗಾಯಗೊಂಡು ಮಂಡ್ಯ ಮಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳ ಆರೋಗ್ಯವನ್ನು ಸಂಸದ ಸುನೀಲ್ ಬೋಸ್ ಹಾಗೂ ಶಾಸಕ ಮಹದೇವಪ್ಪ ವಿಚಾರಿಸಿದರು. ಬಳಿಕ ಮಾತನಾಡಿದ ಸುನೀಲ್ ಬೋಸ್, ಅಪಘಾತದಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಸೂಕ್ತ ಚಿಕಿತ್ಸೆ ನೀಡಲು ವೈದ್ಯರಿಗೆ ಸೂಚನೆ ನೀಡಲಾಗಿದೆ ಎಂದರು.

<><><><>

೪೦೦ ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ಕೆಪಿಎಸ್‌ಸಿಯಲ್ಲಿ ನಡೆದಿದೆ ಎನ್ನಲಾದ ಹಗರಣ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಶಿಕ್ಷೆ ವಿಧಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

<><><><>

ಇನ್ನು ಹವಾವರ್ತಮಾನ,

ರಾಜ್ಯದ ಕರಾವಳಿ ಪ್ರದೇಶದಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿದ್ದು, ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿ ಕರ್ನಾಟಕದ ಹಲವೆಡೆ ಮತ್ತು ಒಳನಾಡಿನ ಕೆಲವು ಕಡೆ ಮಳೆಯಾಗಿದೆ. ಮಂಕಿ, ಮೂಡುಬಿದ್ರೆಯಲ್ಲಿ ಅತಿ ಹೆಚ್ಚು ೧೨ ಸೆಂಟಿ ಮೀಟರ್, ಬೆಳ್ತಂಗಡಿಯಲ್ಲಿ ೯, ಕಾರ್ಕಳದಲ್ಲಿ ೮, ಧರ್ಮಸ್ಥಳದಲ್ಲಿ ೭ ಸೆಂಟಿ ಮೀಟರ್ ಮಳೆಯಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>